ಮೈಸೂರ ಗೆಜೆಟ್

ಸರ್ಕಾರದಿಂದ ಘಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಮೇ ತಾ॥ 7, ಸ್ಯ 1887.

☞ ಈ ಭಾಗವನ್ನು ಪ್ರತ್ಯೇಕ ಕೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ವಿಭಾಗ

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್ಗಳು, ವಗೈರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿನಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಪರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಫ್ಫೇನ್ಸೆಮೆಂಟ್ ಯಾನೇ ಪರಾ ಬಗ್ಗೆ ಇದರಡಿ ರುಜಾ ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪೈ ಕೇಟೂದ ಡಿವಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫ್ಫೇನ್ಸೆಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್ಟ್ರೋಲರ್.

ಮೈಸೂರು ರೆವಿನ್ಯೂ ಸರ್ವೆ - ಸೆಟ್ಲ್‌ಮೆಂಟ್ ಇಲಾಖೆ.

ಇಸ್ತಿಹಾರ್‌ನಾಮೆ.

ನಂಬರ್ 103. ತಾರೀಖು 3ನೇ ಮೇ 1887.

ಇದರಿಂದ ಸಕಲಜನಗಳಿಗೂ ತಿಳಿಯುವ ಬಗ್ಗೆ ಪ್ರಕಟಿಸಲ್ಪಡುವದೇನಂದರೆ, ಕೋಲಾರ ಡಿಸ್ಟ್ರಿಕ್ಟು ಚಿಂತಾಮಣಿ ತಾಲ್ಲೂಕಿನ ಸರ್ವೆ ಜಮೊಬಂದಿ ಫೈಸಲಾತಿಯು, ಇದೇ ತಿಂಗಳ 20ನೇ ತಾರೀಖಿಗೆ, ಯಾ, ಆ ಸುಮಾರಿಗೆ ಪ್ರಾರಂಭಿಸಲ್ಪಡುತ್ತೆ.

ಜೆ. ಪಿ. ಗ್ರಾಂಟ್,
ಸೂ॥ ರಿವಿನ್ಯೂ ಸರ್ವೆಯರ್ ಮತ್ತು
ಸೆಟಲ್‌ಮೆಂಟ್ ಮೈಸೂರು.